# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:98 RNI NO.KAR KAN/2003/10452:No./PMG/KA/NK/BM/743/24-26 ರವಿವಾರ ದಿನಾಂಕ: 10-03-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ದೇಶದ ರೈತರು ಗುಣಾತ್ಮಕ ಬೆಳೆಗಳನ್ನು ಬೆಳೆದು ಉದ್ಯಮಿಗಳಾಗಬೇಕಾಗಿದೆ : ಶೋಭಾ ಕರಂದ್ಲಾಜೆ

ಬೆಳಗಾವಿ : ಅಂತರಾಷ್ಟ್ರೀಯ ಮಾರುಕಟ್ಟೆಗೆ ಬೆಳೆಯನ್ನು ಒದಗಿಸಬೇಕಾದರೆ ಅದರ ಮಾನದಂಡದಡಿ ರೈತರು ಗುಣಮಟ್ಟದ ಬೆಳೆಗಳನ್ನು ಬೆಳೆಯಬೇಕು. ನಮ್ಮ ಸಾಂಪ್ರದಾಯಿಕ ಆಹಾರ ಸಿರಧಾನ್ಯ ಅದನ್ನು ಉಳಿಸುವುದು ಇಂದಿನ ಅಗತ್ಯತೆ ಇದೆ ಎಂದು ರಾಜ್ಯ ಕೃಷಿ ಮತ್ತು ರೈತರ ಕಲ್ಯಾಣ ರಾಜ್ಯ ಸಚಿವರಾದ ಶೋಭಾ ಕರದ್ಲಾಂಜೆ ಅವರು ಹೇಳಿದರು.

ಅವರು ಬೈಲಹೊಂಗಲ ತಾಲೂಕಿನ ಮತ್ತಿಕೊಪ್ಪದಲ್ಲಿರುವ ಕೆಎಲ್ಇ ಐಸಿಎಆರ್-ಕೃಷಿ ವಿಜ್ಞಾನ ಕೇಂದ್ರದಲ್ಲಿ ರೈತ ಭವನ, ಸಿಬ್ಬಂದಿ ವಸತಿ ಗೃಹಗಳ ಮತ್ತು ಸ್ವಯಂ ಚಾಲಿತ ಹನಿ ನೀರಾವರಿ ಘಟಕವನ್ನು ದಿನಾಂಕ 09.03.2024 ರಂದು ಉದ್ಘಾಟಿಸಿ ಮಾತನಾಡಿದರು.

ದೇಶವಿಂದು ಬೀಜೋತ್ಪಾದನೆಯಲ್ಲಿ ಸ್ವಾವಲಂಬಿಯಾಗಿ, ಉತ್ತಮವಾದ ಬೆಳೆಗಳನ್ನು ಬೆಳೆಯುವ ಮೂಲಕ ಉತ್ತಮವಾದ ಆದಾಯವನ್ನು ಗಳಿಸುವಂತಾಗಬೇಕು. ಅದರೊಂದಿಗೆ ಕೃಷಿ ಮೂಲಭೂತ ಸೌಲಭ್ಯಗಳನ್ನು ಹೆಚ್ಚಿಸಬೇಕು. ಕೇಂದ್ರ ಸರಕಾರ ಸಾಕಷ್ಟು ಹಣವನ್ನು ಅದಕ್ಕಾಗಿಯೇ ಮೀಸಟ್ಟಿದೆ, ಅದನ್ನು ಸದುಪಯೋಗ ಪಡಿಸಿಕೊಂಡು ರೈತರು ಉದ್ಯಮಿಗಳಾಗಿ ಬೆಳೆಯಬೇಕಾಗಿದೆ. ಆದರೆ ಜಿಲ್ಲಾವಾರು ಅವಶ್ಯವಿರುವ ಯೋಜನೆಗಳ ಕುರಿತು ಮಾಹಿತಿಯನ್ನು ಕೇಂದ್ರಕ್ಕೆ ಕಳಿಸುತ್ತಿಲ್ಲ ಇದರಿಂದ ರೈತರಿಗೆ ನಷ್ಟವಾಗುತ್ತಿದೆ. ಪ್ರಸ್ತುತ ಸಾಲಿನಲ್ಲಿ 2005 ಹೊಸ ತಳಿಗಳನ್ನು ಅಭಿವೃದ್ಧಿ ಪಡಿಸಲಾಗಿದ್ದು ರೈತರು ಅವುಗಳತ್ತ ಗಮನಹರಿಸಬೇಕು. ಬೇರೆ ಬೇರೆ ದೇಶಗಳು ತಯಾರಾದ ಆಹಾರಗಳನ್ನು ಬೇಡುತ್ತಿವೆ ಆದರೆ



ಗುಣಮಟ್ಟದ ಆಹಾರವನ್ನು ಭಾರತವು ರಫ್ತು ಮಾಡಲು ಸಾಧ್ಯವಾಗುತ್ತಿಲ್ಲ. ಸಾಂಪ್ರದಾಯಿಕ ಆಹಾರ ಪದ್ಧತಿ ಆಹಾರಗಳನ್ನು, ಎಣ್ಣೆಕಾಳುಗಳನ್ನು ಬೆಳೆಯುಬೇಕು. ರಾಸಾಯಿಕಗಳನ್ನು ಬಳಸದೆ ಸಾವಯವ ಕೃಷಿಯೆಡೆಗೆ ಗಮನಹರಿಸಬೇಕಾಗಿದೆ ಎಂದರು. ದೇಶದ ಜನಸಂಖ್ಯೆಗೆ ಆಹಾರವನ್ನು ಪೂರೈಸಲು 1960 ರ ದಶಕದಲ್ಲಿ ದೇಶವು ಗೋದಿಯನ್ನು ಆಮದು ಮಾಡಿಕೊಂಡು ಹೊಸ ತಳಿಗಳ ಉತ್ಪಾದನೆಯಿಂದ ಹಸಿರು ಕ್ರಾಂತಿಯನ್ನು ಸಾಧಿಸಿ ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬ ನೆಯನ್ನು ಸಾಧಿಸಲು ಅನುಕೂಲವಾಯಿತು. ಇದು ದೇಶದ ರೈತರ ಶ್ರಮದಿಂದ ಸಾಧ್ಯವಾಗಿದೆ. ಇಂದು ದೇಶದಲ್ಲಿ 140 ಕೋಟಿ ಜನಸಂಖ್ಯೆಯಿದ್ದು, ಪ್ರತಿವರ್ಷ 130 ಮಿಲಿಯನ್ ಟನ್ ಆಹಾರ ಧಾನ್ಯ ಹಾಗೂ 265 ಮಿಲಿಯನ್ ಟನ್ ತರಕಾರಿ ಹಾಗೂ ಹಣ್ಣು ಬೆಳೆಗಳ ಉತ್ಪಾದನೆಯಾಗುತ್ತಿದೆ. ಇದು 140 ಕೋಟಿ ಜನಸಂಖ್ಯೆಗೆ ಬೇಕಾದ ಆಹಾರ ಬೇಡಿಕೆಗಿಂತ ಅಧಿಕವಾಗಿದೆ. ಈ ದಿಸೆಯಲ್ಲಿ ಗುಣಮಟ್ಟದ ಆಹಾರ ಪೂರೈಸುವ ಹಾಗೂ ಉತ್ಪಾದನೆಯ ಅವಶ್ಯಕತೆ ಇದೆ.

ಈ ದೃಷ್ಟಿಯಿಂದ ರೈತರು ಬೆಳೆಯುತ್ತಿರುವ ಕೃಷಿ ಉತ್ಪನ್ನಗಳಿಗೆ ಹೊರ ದೇಶದಲ್ಲಿ ಮಾರುಕಟ್ಟೆ ಮಾಡುವುದು ಅವಶ್ಯಕವಾಗಿದೆ. ರಫ್ತು ಮಾಡುವ ಗುಣಾತ್ಮಕ ಅಂಶಗಳನ್ನು ಪೂರೈಸುವ ನಟ್ಟಿನಲ್ಲಿ ನಾವು ರಾಸಾಯನಿಕ ಮುಕ್ತ ನೈಸರ್ಗಿಕ ಕೃಷಿ ಹಾಗೂ ಸಾವಯವ ಕೃಷಿ ಪದ್ಧತಿಯನ್ನು ಅನುಸರಿಸಬೇಕಾದ ಅವಶ್ಯಕತೆ ಇದೆ.

ಮುಂದುವರೆದು ಮಾತನಾಡಿದ ಅವರು ಅವಶ್ಯವಿದ್ದಷ್ಟು ಬೆಳೆಗಳಿಗೆ ನೀರು ಹರಿಸಬೇಕು. ಅಂದಾಗ ಗುಣಮಟ್ಟದ ಬೆಳೆ ಬರುತ್ತದೆ. ಅದಕ್ಕಾಗಿ ಇಸ್ರೇಲ್ ಮಾದರಿಯ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಬೇಕು. ಅದಕ್ಕೆ ಕೇಂದ್ರ ಸರ್ಕಾರ ಹಲವಾರು ಕ್ರಮಗಳನ್ನು ಕೈಗೊಂಡಿದೆ. ಇಂದು ನಕಲಿ ಬೀಜಗಳ ಹಾವಳಿ ಹೆಚ್ಚಾಗಿದ್ದು ಅನೇಕ ಕಾನೂನಿನ ಕ್ರಮಗಳನ್ನು ಕೈಗೊಂಡಿದೆ. ಕ್ಯೂಆರ್ ಕೋಡ್ ವ್ಯವಸ್ಥೆಯನ್ನು ಈ ನಟ್ಟಿನಲ್ಲಿ ಅಳವಡಿಸಿಕೊಂಡಿದ್ದೇ ಆದರೆ ರೈತರ ಮೋಸ ಹೋಗುವ ಪ್ರಮೆಯೇ ಬರುವುದಿಲ್ಲ. ಅದನ್ನು ಕೇಂದ್ರ ಸರ್ಕಾರ ಶೀಘ್ರವಾಗಿ ಜಾರಿಗೆ ತರಲಿದೆ ಎಂದರು.

ಕೆಎಲ್ಇ ಕೃಷಿ ವಿಜ್ಞಾನ ಕೇಂದ್ರ ಮಹತ್ಸಾಧನೆ: ಡಾ.ಪ್ರಭಾಕರ ಕೋರೆಯವರ ಇಚ್ಚಾಶಕ್ತಿಯಿಂದ ಪ್ರಾರಂಭಗೊಂಡಿರುವ ಕೃಷಿ ವಿಜ್ಞಾನ ಕೇಂದ್ರ ಒಂದು ಮಾದರಿ ಕೇಂದ್ರವೆನಿಸಿದ್ದು, ಈ ಭಾಗದ ರೈತರಿಗೆ ವರದಾನವೆನಿಸಿದೆ. ರೈತರಿಗೆ ಇಸ್ರೇಲ್ ಮಾದರಿಯ ಹನಿ ನೀರಾವರಿಯನ್ನು ಪರಿಚಯಿಸುವುದರ ಮೂಲಕ ಅವರ ಸ್ವಾವಲಂಬಿ ಬದುಕಿಗೆ ಆಧಾರವಾಗಿ ನಿಂತಿದೆ. ರೈತರು ಹೆಚ್ಚಿನ ಸಂಖ್ಯೆಯಲ್ಲಿ ಇಲ್ಲಿ ಆಗಮಿಸಿ ತರಬೇತಿಯನ್ನು ಪಡೆದು, ತಮ್ಮ ಕೃಷಿಭೂಮಿಯಲ್ಲಿ ಅಳವಡಿಕೊಳ್ಳಬೇಕೆಂದು ಕರೆನೀಡಿ ಮೆಚ್ಚುಗೆ ವ್ಯಕ್ತಪಡಿಸಿದರು.

(2 ನೇ ಪುಟಕ್ಕೆ)

## ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅಥಣಿ ಶಾಸಕರಾದ ಲಕ್ಷ್ಮಣ್ ಸವದಿ ಭೂಮಿ ಪೂಜೆ

ಬೆಳಗಾವಿ: ಅಥಣಿ ಪಟ್ಟಣದ ಜತ್ತ ರಸ್ತೆಗೆ ಹೊಂದಿಕೊಂಡಿರುವ ಮುಸ್ಲಿಂ ಬಾಂಧವರ ಪ್ರಾರ್ಥನಾ ಸ್ಥಳವಾದ ಈದ್ಗಾ ಮೈದಾನ ಸೇರಿದಂತೆ ಅಥಣಿ ಪಟ್ಟಣದಲ್ಲಿನ ಅಲ್ಪಸಂಖ್ಯಾತರು ಹೆಚ್ಚಿರುವ ವಿವಿಧ ಬಡಾವಣೆಗಳಲ್ಲಿ ಸರ್ಕಾರದ ಅಲ್ಪಸಂಖ್ಯಾತರ ನಿಧಿ ಯೋಜನೆ ಅಡಿ 5 ಕೋಟಿ ರೂ. ವೆಚ್ಚದಲ್ಲಿ ಮೂಲ ಸೌಲಭ್ಯ ಕಲ್ಪಿಸುವ ಹಾಗೂ ವಿವಿಧ



ಅಭಿವೃದ್ಧಿ ಕಾಮಗಾರಿಗಳಿಗೆ ಮಾಜಿ ಉಪ ಮುಖ್ಯಮಂತ್ರಿಗಳು ಹಾಲಿ ಶಾಸಕರಾದ ಲಕ್ಷ್ಮಣ ಸವದಿ ಭೂಮಿಪೂಜೆ ನೆರವೇರಿಸಿದರು.

ಬಳಿಕ ನಡೆದ ಸಮಾರಂಭದಲ್ಲಿ ಮಾತನಾಡಿದ ಅವರು ಅಲ್ಪಸಂಖ್ಯಾತರ ನಿಧಿಯಿಂದ 5 ಕೋಟಿ ರೂಪಾಯಿ ವೆಚ್ಚದ ಕಾಮಗಾರಿಯನ್ನ ಸರ್ಕಾರದ ಏಜೆನ್ಸಿಯಾಗಿರುವ ಕೆ ಆರ್ ಡಿ ಸಿ ಎಲ್ ಸಂಸ್ಥೆಗೆ ಒಹಿಸಲಾಗಿದ್ದು ಅಲ್ಪಸಂಖ್ಯಾತರು ಹೆಚ್ಚು ಇರುವ ಸ್ಥಳಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸವ ನಟ್ಟಿನಲ್ಲಿ ವಿವಿಧ ಕಾಮಗಾರಿಗಳಿಗೆ ಇಂದು ಚಾಲನೆ ನಡಲಾಗಿದ್ದು ರಂಜಾನ್ ತಿಂಗಳು ಅಂತ್ಯದ ಒಳಗಾಗಿ ಕಾಮಗಾರಿ ಪೂರ್ಣಗೊಳ್ಳಲಿದೆ ಎಂದರು. ಈ ಸಂದರ್ಭದಲ್ಲಿ ಚಿಕ್ಕೋಡಿ ಜಿಲ್ಲಾ ವಕ್ಫ ಸಲಹಾ ಸಮಿತಿಯ ಉಪಾಧ್ಯಕ್ಷರಾದ ಆಸೀಫ ತಾಂಬೋಳಿ, ಅಂಜುಮನ್ ಎ ಇಸ್ಲಾಂ ಕಮಿಟಿ ಅಧ್ಯಕ್ಷ ಸಯ್ಯದ್ ಅಮಿನ ಗದ್ಯಾಳ, ಅಸ್ಲಂ ನಾಲಬಂದ, ಮುಸ್ತಾಕ್ ಮುಲ್ಲಾ, ದತ್ತಾ ವಾಸ್ಟರ್, ಮಾಜಿ ಪುರಸಭೆ ಅಧ್ಯಕ್ಷ ದಿಲೀಪ ಲೋಣಾರಿ, ರಾಜು ಬುಲಬುಲೆ, ಸಂತೋಷ ಸಾವಡಕರ್, ರಾವಸಾಬ ಐಹೊಳೆ, ಮಲ್ಲು ಹುದ್ದಾರ್, ಬೀರಪ್ಪ ಯಕ್ಕಂಚಿ, ಬಾಬು ಗದ್ಯಾಳ್, ಬಾಬು ಮುಲ್ಲಾ, ಅಕ್ಬರ್ ಮುಲ್ಲಾ, ಶಫಿ ಮುಲ್ಲಾ ರಿಯಾಜ್ ಸನದಿ, ಅಬ್ದುಲ ಅಜೀಜ್ ಮುಲ್ಲಾ, ಆಬಿದ ಮಾಸ್ಟರ್, ಇಲಿಯಾಸ್ ಹಿಪ್ಪರಗಿ, ಬಾಬು ಖೆಮಲಾಪೂರ್, ಐ.ಜಿ . ಬಿರಾದಾರ್, ಇರ್ಷಾದ್ ಮನಗೂಳಿ, ಸಲಾಂ ಕಲ್ಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಪಂಚ-ಗಂಗಾ ಒಣದ್ರಾಕ್ಷಿ ಸಂಸ್ಕರಣಾ ಘಟಕಕ್ಕೆ ಚಾಲನೆ ನೀಡಿದ ಸಚಿವ ಎಂ.ಬಿ.ಪಾಟೀಲ

ವಿಜಯಪುರ, ಮಾ. 09: ಉದ್ಯಮಿ ಅಣ್ಣಾರಾಯ ಎಸ್. ಬಿರಾದಾರ ಆರಂಭಿಸಿದ ಪಂಚ-ಗಂಗಾ ಒಣದ್ರಾಕ್ಷಿ ಸಂಸ್ಕರಣಾ ಘಟಕಕ್ಕೆ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಚಾಲನೆ ಇಂದು ನೀಡಿದರು.

ಅವರು ಪಂಚ-ಗಂಗಾ ಒಣದ್ರಾಕ್ಷಿ ಸಂಸ್ಕರಣಾ ಘಟಕದ ಯಂತ್ರದಲ್ಲಿ ಒಣದ್ರಾಕ್ಷಿಯನ್ನು ಹಾಕುವ ಮೂಲಕ ಸಚಿವ ಎಂ. ಬಿ. ಪಾಟೀಲ ವಿಂಗಡಣೆ ಯಂತ್ರಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಅಣ್ಣಾರಾಯ ಎಸ್. ಬಿರಾದಾರ, ನಿತೀನ ಎ. ಬಿರಾದಾರ, ವಿಠ್ಠಲ ಕಟಕದೊಂಡ, ಎಸ್.ಎಂ.ಪಾಟೀಲ ಗಣಿಹಾರ, ಪ್ರಕಾಶಗೌಡ ಪಾಟೀಲ, ಮುಂತಾದವರು ಉಪಸ್ಥಿತರಿದ್ದರು.

ನಗರದ ಸೋಲಾಪುರ ರಸ್ತೆಯ ಯಶೋಧಾ ಆಸ್ಪತ್ರೆ ಹಿಂದೆ ಇರುವ ಒಣದ್ರಾಕ್ಷಿ ಸಂಸ್ಕರಣಾ ಘಟಕದಲ್ಲಿ ಇಂದು ಶನಿವಾರ ಈ ಕಾರ್ಯಕ್ರಮ ನಡೆಯಿತು.




ಘಟಕದ ಕಾರ್ಯವನ್ನು ವೀಕ್ಷಿಸಿ, ಒಣದ್ರಾಕ್ಷಿ ಸಂಗ್ರಹ, ಸಂಸ್ಕರಣೆ, ಮಾರಾಟ ಹಾಗೂ ರಫ್ತು ಮಾಡುವ ಕುರಿತು ಮಾಹಿತಿ ಪಡೆದರು. ಅಲ್ಲದೇ, ಈ ಘಟಕ ಉತ್ತರೋತ್ತರವಾಗಿ ಅಭಿವೃದ್ಧಿಯಾಗಲಿ ಎಂದು ಅಣ್ಣಾರಾಯ ಎಸ್. ಬಿರಾದಾರ ಮತ್ತು ಅವರ ಪುತ್ರ ನಿತೀನ ಎ.ಬಿರಾದಾರ ಅವರಿಗೆ ಶುಭ ಕೋರಿದರು.

ಈ ಸಂದರ್ಭದಲ್ಲಿ ವಿಜಯಪುರ ಜ್ಞಾನಯೋಗಾಶ್ರಮದ ಶ್ರೀ ಬಸವಲಿಂಗ ಸ್ವಾಮೀಜಿ, ನಾಗಠಾಣ ಶಾಸಕ ವಿಠ್ಠಲ ಕಟಕದೊಂಡ, ಪಶ್ಚಿಮ ಬಂಗಾಳ ನಿವೃತ್ತ ಡಿಜಿಪಿ ಜಿ.ಎಂ.ಪಿ ರೆಡ್ಡಿ, ಉದ್ಯಮಿಗಳಾದ ಪ್ರಕಾಶಗೌಡ ಪಾಟೀಲ, ಮುಖಂಡರಾದ ಎಸ್.ಎಂ.ಪಾಟೀಲ ಗಣಿಹಾರ, ಬಸವರಾಜ ದೇಸಾಯಿ, ಡಾ.ಮಹಾಂತೇಶ ಬಿರಾದಾರ ಮುಂತಾದವರು ಉಪಸ್ಥಿತರಿದ್ದರು.

## ಇಂದು ಬೆಳಗಾವಿ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಕಾಮಗಾರಿಗೆ ಪ್ರಧಾನಿ ಮೋದಿ ಅವರಿಂದ ಚಾಲನೆ-ಸಂಸದ ಈರಣ್ಣ ಕಡಾಡಿ

ಬೆಳಗಾವಿ: ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ರೂ.357 ಕೋಟಿ ವೆಚ್ಚದಲ್ಲಿ 16,400 ಚದರ ಮೀಟರ್ ವಿಸ್ತೀರ್ಣದಲ್ಲಿ ನಿರ್ಮಾಣವಾಗಲಿರುವ ಹೊಸ ಟರ್ಮಿನಲ್ ಕಾಮಗಾರಿಗೆ ನಾಳೆ ಮುಂಜಾನೆ 11.40 ಗಂಟೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ವರ್ಚೂವಲ್ ಮೂಲಕ ಚಾಲನೆ ನೀಡಲಿದ್ದಾರೆ ಎಂದು ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಅವರು ಹೇಳಿದ್ದಾರೆ.ಶನಿವಾರ ಮಾ-09 ರಂದು ಪತ್ರಿಕಾ ಹೇಳಿಕೆ ನೀಡಿದ ಸಂಸದ ಈರಣ್ಣ ಕಡಾಡಿ ಅವರು ಈ ಹೊಸ ಟರ್ಮಿನಲ್‌ನಲ್ಲಿ ನಾಲ್ಕು ಏರೋಬ್ರಿಡ್ಜ್, ತಲಾ 8 ಎಕ್‌ಲೇಟರ್, ಲಿಫ್ಟ್, ಏಕಕಾಲಕ್ಕೆ ಹೊರ ಹೋಗುವ ಮತ್ತು ಒಳ ಬರುವ 2,400 ಪ್ರಯಾಣಿಕರನ್ನು ನಿರ್ವಹಿಸುವ ಸಾಮರ್ಥ್ಯವನ್ನು ಹೊಸ ಟರ್ಮಿನಲ್ ಹೊಂದಲಿದೆ. ಏಕಕಾಲಕ್ಕೆ 9 ವಿಮಾನಗಳ ನಿಲುಗಡೆ ವ್ಯವಸ್ಥೆ, ಟರ್ಮಿನಲ್ ಎದುರಿಗೆ 500 ಕಾರು, 200 ಬೈಕ್ ಇತರೆ ವಾಹನಗಳ ಪಾರ್ಕಿಂಗ್‌ಗೆ ಅವಕಾಶ ಇದೆ ಎಂದರು. ಈ ವಿಮಾನ ನಿಲ್ದಾಣ ಅಂತಾರಾಷ್ಟ್ರೀಯ ಮಟ್ಟಕ್ಕೆ ಮೇಲ್ದರ್ಜೆಗೇರಿಸಲು ಪ್ರಯತ್ನಿಸಲಾಗುತ್ತಿದೆ. ನವದೆಹಲಿ, ಮುಂಬೈ ಸೇರಿದಂತೆ ದೇಶದ ಅನೇಕ ಮಹಾನಗರಗಳಿಗೆ ಬೆಳಗಾವಿಯಿಂದ ನೇರವಾಗಿ ವಿಮಾನಯಾನ ಸಂಪರ್ಕ ಇದೆ. ಮುಂಬರುವ ದಿನಗಳಲ್ಲಿ ಹೆಚ್ಚಿನ ವಿಮಾನ ಸೇವೆ ಸಿಗಲಿದ್ದು, ಇದು ಉತ್ತರ ಕರ್ನಾಟಕ ಜನರಿಗೆ ಅನುಕೂಲ ಆಗಲಿದೆ. ಬೆಳಗಾವಿ ವಿಮಾನ ನಿಲ್ದಾಣದಿಂದ ಬೆಂಗಳೂರು, ದೆಹಲಿ, ಮುಂಬೈ, ಹೈದರಾಬಾದ್, ಅಹಮದಾಬಾದ್, ಸೂರತ್, ನಾಗುರ, ತಿರುಪತಿ, ಜೋಧಪುರ, ಜೈಪುರ ಸೇರಿದಂತೆ 10 ನಗರಗಳಿಗೆ ವಿಮಾನ ಸಂಚಾರವಿದೆ. ಪ್ರತಿ ದಿನ ಸರಾಸರಿ 24 ವಿಮಾನಗಳು ಬೆಳಗಾವಿ ವಿಮಾನ ನಿಲ್ದಾಣದ ಮೂಲಕ ಸಂಚಾರ ಕೈಗೊಳ್ಳುತ್ತವೆ. ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಹೊಸ ಟರ್ಮಿನಲ್ ನಿರ್ಮಾಣದ ಗುತ್ತಿಗೆಯನ್ನು ಕೆಎಂವಿ ಪ್ರಾಜೆಕ್ಟ್ ಕಂಪನಿ ಗುತ್ತಿಗೆ ಪಡೆದುಕೊಂಡಿದೆ. ಉದ್ದೇಶಿತ ಹೊಸ ಟರ್ಮಿನಲ್ ಏಕಕಾಲಕ್ಕೆ 2400 ಪ್ರಯಾಣಿಕರಿಗೆ ಸ್ಥಳಾವಕಾಶ ಒದಗಿಸಲಿದೆ.ವಿಮಾನ ನಿಲ್ದಾಣದಲ್ಲಿ ಸದ್ಯ ಟರ್ಮಿನಲ್ 3,600 ಚದರ ಮೀಟರ್ ವಿಸ್ತೀರ್ಣದ್ದಾಗಿದೆ. ಏಕಕಾಲಕ್ಕೆ ಬೆಳಗಾವಿ ವಿಮಾನ ನಿಲ್ದಾಣದಿಂದ ಬೇರೆ ನಗರಗಳಿಗೆ ತೆರಳುವ 320 ಮತ್ತು ಇತರೆ ನಗರಗಳಿಂದ ಬೆಳಗಾವಿಗೆ ಬರುವ 320 ಪ್ರಯಾಣಿಕರು ಸೇರಿ ಒಟ್ಟು 640 ಪ್ರಯಾಣಿಕರಿಗೆ ಟರ್ಮಿನಲ್‌ನಲ್ಲಿ ಸ್ಥಳಾವಕಾಶ ಇರಲಿದೆ ಎಂದು ತಿಳಿಸಿದ್ದಾರೆ.

## ಕಾಂಗ್ರೆಸ್ ಜನರ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡಲಿಲ್ಲಾ : ಎಸ್.ವಿ. ಸಂಕನೂರ

ಬೆಳಗಾವಿ : ಎಮ್.ಎಲ್.ಸಿ. ಎಸ್ ವಿ ಸಂಕನೂರ ಪತ್ರಿಕಾ ಗೋಷ್ಠಿ ನಮ್ಮ ರಾಜ್ಯದಲ್ಲಿ ಪಂಚ ಗ್ಯಾ ರಂಟಿ ಮೂಲಕ ಅಧಿಕಾ ರಿಕ್ಕೆರಿದ ಕಾಂಗ್ರೆಸ್ ಜನರ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡಲಿಲ್ಲಾ. ರಾಜ್ಯದ ಜನತೆ ಯಾಕೆ ಈ ಸರ ಕಾರ ತಂದು ಎಂದು ಮಾತನಾಡಿಕ್ಕೊಳ್ಳುತ್ತಿದ್ದಾರೆ.ರಾಜ್ಯಕ್ಕೆ



ಭೀಕರ ಬರಗಾಲ ಬಂದಿದೆ ಕಾಂಗ್ರೆಸ್ ಸರಕಾರ ಸಮರ್ಪಕವಾಗಿ ನಿಭಾಯಿಸತಾ ಇಲ್ಲಾ ಕಾಂಗ್ರೆಸ್ ಸರಕಾರ ಬಂದ ಮೇಲೆ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಬರಗಾಲ ಸಂದರ್ಭದಲ್ಲಿ ನಮ್ಮ ಸಹಾಯಕ್ಕೆ ರಾಜ್ಯ ಸರಕಾರ ಬರುತ್ತೆ ಅಂತಾ ರೈತರು ಕಾಯತ್ತಾ ಇದ್ದಾರೆ ನರೇಂದ್ರ ಮೋದಿ ಅವರು ಜಾರಿ ಮಾಡಿದ್ದ ಕಿಸಾನ ಸಮ್ಮಾನ ಯೋಜನೆ ನಿಲ್ಲಿಸಿ ಬಿಟ್ಟರು ರಾಜ್ಯದ ಜನ ಕೆಲಸ ಇಲ್ಲದೆ ಗುಳೆ ಹೋಗುತ್ತಿದ್ದಾರೆ.ಕಳೆದ ಹಲವು ದಿನಗಳಿಂದ ದೇಶದ್ರೋಹಿ ಚಟುವಟಿಕೆ ನಡಿತಾ ಇದೆ.ಮಹಿಳೆಯರ ಮೇಲೆ ದೌರ್ಜನ್ಯ ನಡಿತಾ ಇದೆ ಸರಕಾರ ಪೋಲಿಸರು ಎಲ್ಲಿ ಹೋಗಿದ್ದರು ಹಾವೇರಿಯಲ್ಲಿ ನೈತಿಕ ಪೋಲಿಸ್ ಗಿರಿ ಆಗಿದೆ ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯ ಆಗಿದೆ.ಕಳೆದ 8 ತಿಂಗಳಲ್ಲಿ ಭಯೋತ್ಪಾದಕ ಚಟುವಟಿಕೆಗಳು ರಾಜ್ಯದಲ್ಲಿ ನಡಿತಾ ಇವೆ. ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಅಂತಾ ಘೋಷಣೆ ಮಾಡಿದವರನ್ನ ಅರೆಸ್ಟ ಯಾಕೆ ಮಾಡಲಿಲ್ಲಾ ಭಯೋತ್ಪದಕರನ್ನ ಅರೆಸ್ಟ್ ಮಾಡಲಿಕೆ ಪ್ರೂಫ್ ಬೇಕಂತೆ ಬೆಂಗಳೂರಿನ ರಾಮೇಶ್ವರ ಕೆಫೆಯಲ್ಲಿ ಬಾಂಬ್ ಸ್ಫೋಟ ಆಗಿದೆ. *ಸಿಎಂ ಸಿದ್ದರಾಮಯ್ಯ,ಡಿಸಿಎಂ ಡಿಕೆಶಿ ಅವರು ಜನರ ಮನಸ್ಸನ್ನ ಬೇರೆ ಕಡೆ ಸೆಳೆಯುವಂತ ಕೆಲಸ ಮಾಡುತ್ತಿದ್ದಾರೆ.ಮೋದಿ ಅವರು 2014 ರಲ್ಲಿ ಪ್ರಧಾನಿಯಾಗಿದ್ದಾರೆ.ಮನಮೋಹನ್ ಸಿಂಗ್ ಅವರು ಪ್ರಧಾನಿ ಇದ್ದಾಗ ರಾಜ್ಯ ಸರಕಾರಕ್ಕೆ ಎಷ್ಟು ಅನುದಾನ ಬಂದಿದೆ ಚೆಕ್ ಮಾಡಿ ಬಿಜೆಪಿ ಬಂದ ಮೇಲೆ ನರೇಂದ್ರ ಮೋದಿ ಅವರು ರಾಜ್ಯಕ್ಕೆ ಎಷ್ಟು ಅನುದಾನ ನೀಡಿದ್ದಾರೆ ಅನ್ನೋದನ್ನ ಚೆಕ್ ಮಾಡಿ ಎಂದ ಸಂಕನೂರ. ಸಿಎಂ ಮತ್ತು ಡಿಸಿಎಂ ಅವರು ಪ್ರಧಾನ ನರೇಂದ್ರ ಮೋದಿ ಅವರ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿದ್ದಾರೆ ಎಂದ ಸಂಕನೂರ ಹೇಳಿಕೆ ನೀಡಿದರು.ಈ ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಬಿಜೆಪಿ ಉಪಾಧ್ಯಕ್ಷರಾದ ಮಾಜಿ ಶಾಸಕ ಅನಿಲ್ ಬೆನ್ಕೆ ಬಿಜೆಪಿ ಒಕ್ತಾರ ರಾದ ಎಂಬಿ ಜಿರ್ಲೆ ಮಹಾನಗರ ಪಾಲಿಕೆ ಆಡಳಿತ ವಿರೋದ್ ಪಕ್ಷದ ನಾಯಕರಾದ ರಾಜಶೇಖರ ಡೋಣಿ ಎಫ್ ಎಸ್ ಸಿದ್ದನಗೌಡ ಈರಯ್ಯ ಕೋತ್ಥನ ಶ್ರೀ ದೇಸಾಯಿ ಗೀತಾ ಸುತಾರ್ ಹಾಗೂ ಬಿಜೆಪಿ ಎಸ್ ಸಿ ಮೋರ್ಚಾ ಅಧ್ಯಕ್ಷರ ಯಲ್ಲೇಶ್ ಕೊಲ್ಕಾರ್ ಉಪಸ್ಥಿತರಿದ್ದರು

## ಮಾಜಿ ಶಾಸಕ ಶ್ರೀ ಸಿ.ಎಸ್. ಮುತ್ತಿನಪೆಂಡಿಮಠ ಮಾರ್ಗ ನಾಮಕರಣ ಮಾಡಿದ ಸಚಿವ ಎಚ್. ಕೆ. ಪಾಟೀಲ

ಗದಗ ಮಾ.9: ಕಾನೂನು, ನ್ಯಾಯ ಮಾನನ ಹಕ್ಕುಗಳು ಸಂಸದೀಯ ವ್ಯವಹಾರಗಳು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರಾದ ಎಚ್.ಕೆ.ಪಾಟೀಲ ಅವರು ರವಿವಾರ ಜಗಜ್ಯೋತಿ ಬಸವೇಶ್ವರರ ಮೂತ್ತಿಗೆ ಹೊಗುವ ಮುಖ್ಯದ್ವಾರದಲ್ಲಿ ಮಾಜಿ ಶಾಸಕ ಶ್ರೀ ಸಿ.ಎಸ್. ಮುತ್ತಿನಪೆಂಡಿಮಠ ಹೆಸರನ್ನು ರಸ್ತೆಗೆ ನಾಮಕರಣ ಮಾಡಿದರು.

ನಂತರ ಮಾತನಾಡಿದ ಸಚಿವ ಎಚ್.ಕೆ. ಪಾಟೀಲ ಅವರು, ಅತ್ಯಂತ ಮುಖ್ಯ ಸುಂದರ ರಸ್ತೆಗೆ ನಾಮಕರಣ ಆಗಿರೋದು ಎಲ್ಲರಿಗೂ ಸಂತೋಷ ತಂದಿದೆ. ಮಾಜಿ ಶಾಸಕ ಸಿ ಎಸ್. ಮುತ್ತಿನಪೆಂಡಿಮಠ ಅವರ ರಾಜಕೀಯ ಜೀವನ ನಂತರದ ಒಡನಾಟ ಬಾಂದವ್ಯ ಅನ್ಯೋನ್ಯವಾಗಿತ್ತು. ಅವರೊಂದಿಗೆ ಡಿ.ಆರ್. ಪಾಟೀಲ ಒಡನಾಟ ಸ್ನೇಹ ಸಂಬಂಧ ತುಂಬಾ ಚನ್ನಾಗಿತ್ತು. ಮುತ್ತಿನಪೆಂಡಿಮಠ ಅವರ ಸ್ನೇಹಿತರನ್ನು ನಾನು ಅತ್ಯಂತ ಸೂಕ್ಷ್ಮವಾಗಿ ಗಮನಸಿದೆ. ಅವರ ತತ್ವ ಸಿದ್ದಾಂತ ಮೆಚ್ಚುವಂತವು. ಅವರು ನಮ್ಮ ಹಿತೈಷಿಗಳು ಎಂಬುದು ಸಂತೋಷ ಎನಿಸಿತು.

ರಾಜಕಾರಣದಲ್ಲಿ ಸಕ್ರಿಯವಾಗಿ ಸ್ವಲ್ಪದಿನ ಇದ್ದರು ಸಹ ಬಹಳಷ್ಟು ಜನರನ್ನು ಗಳಿಸಿಕೊಂಡಿದ್ದರು. ಅನೇಕ ಆತ್ಮೀಯ ಗೆಳೆಯ ರನ್ನು




ಸಂಪಾದಿಸಿದ್ದರು, ಅವರದ್ದು ಸ್ನೇಹಪರ ಬದುಕಾಗಿತ್ತು. ಅವರ ಸಂಸ್ಕೃತಿ ಮೇಲುಸ್ಥರದ ವ್ಯಕ್ತಿತ್ವ ಎಲ್ಲರನ್ನು ಸೆಳೆಯುತ್ತಿತ್ತು ಎಂದರು.

ಪ್ರತಿಷ್ಠನದ ಅಧ್ಯಕ್ಷ ವಸಂತ ಮೇಟಿ ಹೇಳಿದಂತೆ ಅವರ ಪುತ್ಥಳಿ ಸ್ಥಾಪನೆ ಬಗ್ಗೆ ಮುಂದಿನ ದಿನಮಾನಗಳಲ್ಲಿ ಕ್ರಮ ವಹಿಸೋಣ ಎಂದರು. ಈ ರಸ್ತೆಗೆ ಅವರ ಹೆಸರು ಅಂತ್ಯತ ಸಮಂಜಸವಾಗಿದೆ. ಇದು ಪ್ರವಾಸಿ ತಾಣ ವಾಗಿ ಎಲ್ಲರನ್ನು ಸೇಳೆಯಲಿದೆ ಎಂದು ಸಚಿವ ಎಚ್. ಕೆ. ಪಾಟೀಲ ಹೇಳಿದರು.

ಮಾಜಿ ಸಚಿವ ಎಸ್. ಎಸ್. ಪಾಟೀಲ ಮಾತನಾಡಿ, ಸಿ.ಎಸ್. ಮುತ್ತಿನಪೆಂಡಿಮಠ ಅವರು ವಕೀಲರಾಗಿ ಜನಸೇವೆ ಮಾಡಿದ್ದಾರೆ. ನಾನು ಶಾಸಕನಾಗಲು ಪ್ರಮುಖ ಕಾರಣ ಸಿ. ಎಸ್. ಮುತ್ತಿನಪೆಂಡಿಮಠ ಎಂದರೆ ತಪ್ಪಾಗದು. ಗದಗ ಜಿಲ್ಲೆಯ ನೀರಿನ ಬವಣೆ ತೀರಿಸಿದ ಬಗೀರಥ ಸಚಿವ ಎಚ್. ಕೆ. ಪಾಟೀಲ ಎಂದು ಹೇಳಿದರು.

ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿ, ಈ ರಸ್ತೆಗೆ ಸಿ. ಎಸ್. ಮುತ್ತಿನಪೆಂಡಿಮಠ ಹರಸರಿಡಲು ನಗರಸಭೆಯಲ್ಲಿ ಸರ್ವಾನುಮತದಿಂದ ಒಪ್ಪಿ ಅಂಗಿಕರಿಸಲಾಗಿದೆ. ಅವರು ಇರಡು ಬಾರಿ ಶಾಸಕರಾಗಿ ಉತ್ತಮ ಕಾರ್ಯಗಳ ಮೂಲಕ ಗಮನ ಸೆಳೆದಿದ್ದಾರೆ. ಅವರ ಕಾರ್ಯಗಳ ಮೂಲಕ ಜನಸಾಮಾನ್ಯರಲ್ಲಿ ಇಂದಿಗೂ ಅವರು ಅಜರಾಮರರಾಗಿದ್ದಾರೆ ಎಂದರು. ತೋಂಟದಾರ್ಯ ಮಠದ ಸಿದ್ಧರಾಮ ಶ್ರೀಗಳು ಸಾನಿಧ್ಯ ವಹಿಸಿ, ಆಶೀರ್ವಚನ ನೀಡುತ್ತಾ, ಜನಸೇವೆ, ನ್ಯಾಯವಾದಿಗಳಾಗಿ ಮಾಡಿದ ಅವರ ಸೇವೆ ಅಗಾದವಾದದು. ನಾಡನ್ನ ಸಂಮೃದ್ದವಾಗಿ ಕಟ್ಟಲು ಮುತ್ತಿನಪೆಂಡಿಮಠ ಅಂತಹವರು ಮತ್ತೆ ಮತ್ತೆ ಹುಟ್ಟಿಬರಬೇಕು. ಸಾರ್ವಜನಕರ ಸೇವೆಯಲ್ಲಿ ಕೆಲಸ ಮಾಡುವಾಗ ಅನೇಕ ವಿರೋಧ ಕಟ್ಟಿಕೊಳ್ಳಬೇಕಾಗುತ್ತದೆ. ನ್ಯಾಯನಿಷ್ಟುರಿಯಾಗಿ ತಮ್ಮ ಕೆಲಸ ನಿರಂತರವಾಗಿ ಮಾಡುತ್ತಾ ಮುಂದೆ ಸಾಗಿದವರು ಅದಕ್ಕಾಗಿಯೇ ಅವರು ಇಂದಿಗೂ ಜನಮಾನಸದಲ್ಲಿ ಇದ್ದಾರೆ. ವ್ಯಕ್ತಿ ವಿಕಾಸಕ್ಕೆ ಅಸ್ಥಿತ್ವಕ್ಕೆ ಸಮಾಜ ಅಗತ್ಯ. ಅಂತಹ ಸಮಾಜ ಏಳ್ಗೆಗೆ ತಮ್ಮ ಜೀವನವನ್ನೆ ಮುಡಿಪಾಗಿಟ್ಟ ವ್ಯಕ್ತಿಯಾಗಿದ್ದರು ಸಿ. ಎಸ್. ಮುತ್ತಿನಪೆಂಡಿಮಠ ಎಂದು ಹೇಳಿದರು.

ಶ್ರೀ ಸಿ.ಎಸ್. ಮುತ್ತಿನಪೆಂಡಿಮಠ ಪ್ರತಿಷ್ಠಾನ, ಗದಗ-ಬೇಟಗೇರಿ ನಗರ ಸಭೆ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಸದಸ್ಯರಾದ ಎಲ್.ಡಿ.ಚಂ ದಾವರಿ, ಪದ್ಮಾ ಕಟಗಿ, ಅನೀಲ ಅಬ್ಬಿಗೇರಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಐ.ಹಿರೆಮನಿ ಪಾಟೀಲ, ಡಾ. ಎಂ.ಬಿ.ಪಾಟೀಲ, ವಿಶ್ವನಾಥ ಪಾಟೀಲ, ಪ್ರತಿಷ್ಠಾನದ ಅಧ್ಯಕ್ಷ ವಸಂತ ಮೇಟಿ ಹಾಜರಿದ್ದರು.